ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಮಂಗಳವಾರ, ದಿನಾಂಕ: 23ನೇ ಜುಲೈ, 2019

ಉತ್ತರ ಕರ್ನಾಟಕದ ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಿಗೆ ಪ್ರತಿ ವರ್ಷ ಬೇಸಿಗೆಯಲ್ಲಿ ಕುಡಿಯುವ ನೀರಿಗೆ ಉಂಟಾಗಿರುವ ಕೊರತೆಯ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

97 (691) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಉತ್ತರ ಕರ್ನಾಟಕದ ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಪ್ರತಿ ವರ್ಷ ಮಾರ್ಚ್-ಏಪ್ರಿಲ್-ಮೇ ತಿಂಗಳುಗಳಲ್ಲಿ ಕುಡಿಯುವ ನೀರಿನ ವಿಪರೀತ ಅಭಾವ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೇಸಿಗೆಯ ಸಮಯದಲ್ಲಿ ಕೃಷ್ಣಾ ನದಿಯ ನೀರಿನ ಮಟ್ಟ ಕಡಿಮೆಯಾಗುವುದರಿಂದ ಬೆಳಗಾವಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳ

ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ತೀವ್ರ ಅಭಾವ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ರಾಜ್ಯದ ಮನವಿಯಂತೆ ಪ್ರತಿ ವರ್ಷ ಬೇಸಿಗೆ ಸಮಯದಲ್ಲಿ ಮಹಾರಾಷ್ಟ್ರ ಸರ್ಕಾರವು ಕುಡಿಯುವ ನೀರಿಗಾಗಿ ರಾಜ್ಯಕ್ಕೆ 4 ಟಿ.ಎಂ.ಸಿ. ನೀರನ್ನು ಬಿಡುಗಡೆ ಮಾಡುತ್ತಿದ್ದು ಈ ವ್ಯವಸ್ಥೆಯನ್ನು ಶಾಶ್ವತವಾಗಿ ಮಾಡಿಕೊಳ್ಳಲು ಮಹಾರಾಷ್ಟ್ರ ಸರ್ಕಾರದೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲು ಸರ್ಕಾರ ಚಿಂತನೆ ಮಾಡುತ್ತಿದೆಯೇ ;

(ಈ) ಇದ್ದಲ್ಲಿ ಇದರ ಬಗ್ಗೆ ಸರ್ಕಾರ ಈವರೆಗೆ ಜರುಗಿಸಿದ ಕ್ರಮದ ಬಗ್ಗೆ ವಿವರ ನೀಡುವುದು ?